**Bangalore**
**Regional News**
**29.08.2026 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ವಿಧಾನಸೌಧದಲ್ಲಿ ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಜನ್ಮ ಶತಮಾನೋತ್ಸವ ; ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಸೇರಿದಂತೆ ಹಲವು ಗಣ್ಯರು ಭಾಗಿ

೨. ಬೆಂಗಳೂರಿನ ಕಂಠೀರವ ಕ್ರೀಡಾಂಗಣವನ್ನು ೫ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಉನ್ನತೀಕರಿಸಲು ಸರ್ಕಾರ ನಿರ್ಧಾರ

೩. ರಾಜ್ಯದಲ್ಲಿ ಮೋಡ ಬಿತ್ತನೆಗೆ ಮಾರ್ಗದರ್ಶನ ನೀಡಲು ಎರಡು ಸಮಿತಿ ರಚಿಸಿ ಜಲಸಂಪನ್ಮೂಲ ಇಲಾಖೆ ಆದೇಶ

೪. ಕೋಲಾರದ ಬಂಗಾರಪೇಟೆಯಲ್ಲಿ ನೂತನ ರೈಲ್ವೆ ಮೇಲ್ಸೇತುವೆ ಲೋಕಾರ್ಪಣೆಗೊಳಿಸಿದ ಕೇಂದ್ರ ಸಚಿವ ವಿ.ಸೋಮಣ್ಣ

೫. ಆಕಾಶವಾಣಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಮನದ ಮಾತು

**<><*<><>*><>**

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಅವರ ೧೦೦ನೇ ಜನ್ಮ ದಿನಾಚರಣೆಯನ್ನು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಉದ್ಘಾಟಿಸಿದರು. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು, ರಾಮಕೃಷ್ಣ ಹೆಗಡೆ ಅವರ ಕುರಿತ ಸಾಕ್ಷ್ಯಚಿತ್ರವನ್ನು ಬಿಡುಗಡೆಗೊಳಿಸಿದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಹಲವಾರು ನಾಯಕರನ್ನು ಬೆಳೆಸಿದ ಕೀರ್ತಿ ರಾಮಕೃಷ್ಣ ಹೆಗಡೆಯವರಿಗೆ ಸಲ್ಲುತ್ತದೆ ಎಂದು ತಿಳಿಸಿದರು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ರಾಮಕೃಷ್ಣ ಹೆಗಡೆಯವರೊಂದಿಗಿನ ಒಡನಾಟವನ್ನು ಮೆಲುಕು ಹಾಕಿದರು. ಹೆಗಡೆಯವರ ವಿಷಯಾಧಾರಿತ ರಾಜಕೀಯವನ್ನು ಅವರು ಕೊಂಡಾಡಿದರು. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

**<><*<><>*><>**

ರಾಷ್ಟ್ರೀಯ ಕ್ರೀಡಾದಿನದ ಅಂಗವಾಗಿ ಉಪಮುಖ್ಯಮಂತ್ರಿ ಹಾಗೂ ಕ್ರೀಡಾ ಸಚಿವ ಡಾ.ಜಿ.ಪರಮೇಶ್ವರ್, ಕ್ರೀಡಾಪಟುಗಳಿಗೆ ಉತ್ತೇಜನ ನೀಡಲು ಹಲವು ಮಹತ್ವದ ಘೋಷಣೆ ಮಾಡಿದ್ದಾರೆ. ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಿಗೆ ೧೫ ಲಕ್ಷ ರೂಪಾಯಿ ನೀಡುವುದಾಗಿ ಘೋಷಿಸಿದ್ದಾರೆ. ೩೬ ಕೋಟಿ ರೂಪಾಯಿ ವೆಚ್ಚದಲ್ಲಿ ರಾಜ್ಯಾದ್ಯಂತ ೩೨ ಕ್ರೀಡಾಂಗಣ ಅಭಿವೃದ್ಧಿ ಕ್ರೀಡೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಹಾಜರಾತಿಯಲ್ಲಿ ವಿನಾಯಿತಿ ಘೋಷಿಸಿದ್ದಾರೆ. ೨೦೩೦ರ ಕಾಮನ್‌ವೆಲ್ತ್ ಕ್ರೀಡಾಕೂಟಕ್ಕೂ ಮುನ್ನ ಬೆಂಗಳೂರಿನ ಕಂಠೀರವ ಕ್ರೀಡಾಂಗಣವನ್ನು ೫ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಉನ್ನತೀಕರಿಸುವ ಯೋಜನೆಯನ್ನು ರೂಪಿಸಲಾಗಿದೆ. ಕಾಮನ್‌ವೆಲ್ತ್ ಗೇಮ್ಸ್‌ನ ಆಯ್ದ ಕ್ರೀಡಾಸ್ಪರ್ಧೆಗಳನ್ನು ಬೆಂಗಳೂರಿನಲ್ಲಿ ಆಯೋಜಿಸಲು ಅವಕಾಶ ಕಲ್ಪಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಈ ಬಾರಿ ಹೆಚ್ಚಿನ ಭಾಗಗಳಲ್ಲಿ ಮುಂಗಾರು ಮಳೆಯ ಕೊರತೆ ಉಂಟಾಗಿದ್ದು, ಸರ್ಕಾರ ಮೋಡ ಬಿತ್ತನೆ ನಡೆಸಲು ನಿರ್ಧರಿಸಿದೆ. ಇದರ ಅನುಷ್ಠಾನಕ್ಕಾಗಿ ಮೇಲ್ವಿಚಾರಣೆ ಮತ್ತು ತಾಂತ್ರಿಕ ಮಾರ್ಗದರ್ಶನ ನೀಡಲು ಎರಡು ಸಮಿತಿಗಳನ್ನು ರಚಿಸಲಾಗಿದೆ ಎಂದು ಜಲಸಂಪನ್ಮೂಲ ಸಚಿವಾಲಯ ಪ್ರಕಟಣೆಯಲ್ಲಿ ತಿಳಿಸಿದೆ. ಮೊದಲ ಸಮಿತಿಯಲ್ಲಿ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು ಸೇರಿದಂತೆ ೬ ಸದಸ್ಯರು ಇರಲಿದ್ದಾರೆ. ಈ ಸಮಿತಿಯು ಮೋಡ ಬಿತ್ತನೆ ಕಾರ್ಯಕ್ರಮದ ಒಟ್ಟಾರೆ ಮೇಲ್ವಿಚಾರಣೆ ಮತ್ತು ಪರಿಶೀಲನೆ ನಡೆಸಲಿದೆ. ಎರಡನೇ ಸಮಿತಿಯು ತಾಂತ್ರಿಕ ಸಲಹಾ ಮತ್ತು ಮೌಲ್ಯ ಮಾಪನ ಸಮಿತಿಯಾಗಿದ್ದು, ಕಾರ್ಯಕ್ರಮ ಅನುಷ್ಠಾನಗೊಳಿಸಲು ತಾಂತ್ರಿಕ ನೆರವು ಮಾರ್ಗದರ್ಶನ ಹಾಗೂ ಶಿಫಾರಸ್ಸುಗಳನ್ನು ನೀಡಲಿದೆ. ಇದರಲ್ಲಿ ಕೆಎಸ್‌ಎನ್‌ಡಿಎಂಸಿ ನಿರ್ದೇಶಕರು ಸಮಿತಿಯ ಅಧ್ಯಕ್ಷ ವಹಿಸಲಿದ್ದು, ೮ ಸದಸ್ಯರು ಹಾಗೂ ವಿಶೇಷ ಆಹ್ವಾನಿತರು ಇರಲಿದ್ದಾರೆ. ಮೋಡಬಿತ್ತನೆ ಕಾರ್ಯಕ್ರಮಕ್ಕಾಗಿ ಜಿಎಸ್‌ಟಿ ಹೊರತುಪಡಿಸಿ ೨೮ ಕೋಟಿ ೫೨ ಲಕ್ಷ ರೂಪಾಯಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದು ಸರ್ಕಾರ ತಿಳಿಸಿದೆ.

<><*<><>*><>

ಕೋಲಾರ ಜಿಲ್ಲೆಯ ಬಂಗಾರಪೇಟೆ ಪಟ್ಟಣದ ಜನತೆಯ ಬಹುದಿನಗಳ ಬೇಡಿಕೆಯಾಗಿದ್ದ ಬೂದಿಕೋಟೆ ವೃತ್ತದ ನೂತನ ರೈಲ್ವೆ ಮೇಲ್ಸೇತುವೆಯನ್ನು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಇಂದು ಲೋಕಾರ್ಪಣೆಗೊಳಿಸಿದರು. ಈ ವೇಳೆ ಮಾತನಾಡಿದ ಅವರು, ಸುಮಾರು ೩೧ ಕೋಟಿ ೫೧ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಿರುವ ಈ ಅತ್ಯಾಧುನಿಕ ಮೇಲ್ಸೇತುವೆಯು ವಾಹನ ಹಾಗೂ ರೈಲುಗಳ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸಿದೆ ಎಂದು ತಿಳಿಸಿದ್ದಾರೆ. ಕೋಲಾರ ಜಿಲ್ಲೆಯಲ್ಲಿರುವ ಎಲ್ಲಾ ಲೆವೆಲ್ ಕ್ರಾಸಿಂಗ್‌ಗಳಿಗೆ ಮೇಲ್ಸೇತುವೆ ಅಥವಾ ಅಂಡರ್‌ಪಾಸ್ ನಿರ್ಮಿಸುವ ಮೂಲಕ ಜಿಲ್ಲೆಯನ್ನು ಸಂಪೂರ್ಣ ರೈಲ್ವೆ ಗೇಟ್ ಮುಕ್ತವನ್ನಾಗಿಸುವ ಗುರಿ ಹೊಂದಲಾಗಿದೆ. ಇದಕ್ಕೆ ಅಗತ್ಯವಿರುವ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಜಿಲ್ಲಾಡಳಿತ ಮತ್ತು ಜನಪ್ರತಿನಿಧಿಗಳ ಸಹಕಾರ ಅತ್ಯಗತ್ಯ ಎಂದು ಹೇಳಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ನಾಳೆ ಬೆಳಗ್ಗೆ ೧೧ ಗಂಟೆಗೆ ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್‌ನಲ್ಲಿ ದೇಶ ಹಾಗೂ ವಿದೇಶಗಳ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ರೇಡಿಯೊ ಕಾರ್ಯಕ್ರಮದ ೧೩೭ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳಲ್ಲಿ ಮತ್ತು ಎಐಆರ್ ನ್ಯೂಸ್ ವೆಬ್‌ಸೈಟ್ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲೂ ಕಾರ್ಯಕ್ರಮ ನೇರಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<><*<><>*><>

ವಾಲ್ಮೀಕಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ರಾಜೀನಾಮೆ ನೀಡಿರುವ ಯೋಜನೆ ಮತ್ತು ಸಾಂಖ್ಯಿಕ ಸಚಿವ ಬಿ.ನಾಗೇಂದ್ರ ಅವರ ರಾಜೀನಾಮೆ ಪತ್ರವನ್ನು ಇಂದು ರಾಜ್ಯಪಾಲರಿಗೆ ಕಳುಹಿಸುವುದಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷಕ್ಕೆ ಮುಜುಗರವಾಗುವುದನ್ನು ತಪ್ಪಿಸಲು ನಾಗೇಂದ್ರ ಸ್ವಯಂ ಪ್ರೇರಣೆಯಿಂದ ರಾಜೀನಾಮೆ ನೀಡಿರುವುದಾಗಿ ಹೇಳಿದ್ದಾರೆ. ಬಿಜೆಪಿ ಮತ್ತು ಜೆಡಿಎಸ್ ರಾಜ್ಯದಲ್ಲಿನ ಬರ ಮತ್ತು ಕಾವೇರಿ ನೀರಿನ ವಿವಾದದಂತಹ ವಿಷಯಗಳನ್ನು

ಪರಿಹರಿಸುವುದಕ್ಕಿಂತ ರಾಜಕೀಯದಲ್ಲಿ ಹೆಚ್ಚು ಆಸಕ್ತಿ ಹೊಂದಿದೆ ಎಂದು ಆರೋಪಿಸಿದ್ದಾರೆ. ಪ್ರತಿಪಕ್ಷಗಳಿಗೆ ರಾಜ್ಯದ ಜನರ ಕಲ್ಯಾಣದ ಬಗ್ಗೆ ಹಿತಾಸಕ್ತಿ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**<><*<><>*><>**

ಸದನದ ಒಳಗೆ ಹಾಗೂ ಹೊರಗಿನ ನಿರಂತರ ಹೋರಾಟದಿಂದ ಸಚಿವ ಸ್ಥಾನಕ್ಕೆ ಬಿ.ನಾಗೇಂದ್ರ ರಾಜೀನಾಮೆ ನೀಡಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಪರಿಶಿಷ್ಟ ಸಮುದಾಯಕ್ಕೆ ಸಂದ ಜಯ ಎಂದು ತಿಳಿಸಿದ್ದಾರೆ. ಬಿಜೆಪಿ, ಜೆಡಿಎಸ್, ಒಗ್ಗಟ್ಟಿನ ಹೋರಾಟದಿಂದ ನಾಗೇಂದ್ರ ಅವರ ರಾಜೀನಾಮೆ ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಲಾಗಿದೆ ಎಂದು ಹೇಳಿದ್ದಾರೆ. ಐದು ಕೋಟಿ ರೂಪಾಯಿಗಿಂತ ಹೆಚ್ಚಿನ ಟೆಂಡರ್ ಅಥವಾ ವರ್ಗಾವಣೆಗೆ ಸಚಿವ ಸಂಪುಟದ ಅನುಮೋದನೆಯ ಅಗತ್ಯವಿದೆ. ಅಂತಹವುದರಲ್ಲಿ ವಾಲ್ಮೀಕಿ ನಿಗಮದ ಹಗರಣದಲ್ಲಿ ೫೦ ರಿಂದ ೬೦ ಕೋಟಿ ರೂಪಾಯಿ ವರ್ಗಾವಣೆ ಮಾಡಿದ್ದು, ಹೇಗೆ ಎಂದು ಪ್ರಶ್ನಿಸಿದ್ದಾರೆ.

**<><*<><>*><>**

ಮಂಡ್ಯ ಜಿಲ್ಲೆಯ ಅಭಿವೃದ್ಧಿಗೆ ಲಭ್ಯವಾಗುವ ಸಂಸದರ ನಿಧಿಯನ್ನು ಸಮರ್ಪಕವಾಗಿ ಹಾಗೂ ಆದ್ಯತೆಯ ಮೇರೆಗೆ ಬಳಸಿಕೊಳ್ಳಬೇಕು ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲೆಯ ದಿಶಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಇಲಾಖೆಗಳ ನಡುವೆ ಸಮನ್ವಯತೆ ಇರಬೇಕು ಎಂದು ತಿಳಿಸಿದ್ದಾರೆ. ಮಿಮ್ಸ್ ಆಸ್ಪತ್ರೆಯ ಸಿಬ್ಬಂದಿ ಹಾಗೂ ವೈದ್ಯರ ಹಾಜರಾತಿಯನ್ನು ಕಡ್ಡಾಯವಾಗಿ ಬಯೋಮೆಟ್ರಿಕ್ ವ್ಯವಸ್ಥೆಯ ಮೂಲಕ ದಾಖಲಿಸುವಂತೆ ಸೂಚನೆ ನೀಡಿದ್ದಾರೆ. ರಾಷ್ಟ್ರೀಯ ಹೆದ್ದಾರಿ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗುತ್ತಿರುವ ರಸ್ತೆ ಕಾಮಗಾರಿಗಳನ್ನು ನಿಗದಿತ ಗುಣಮಟ್ಟ ಹಾಗೂ ಮಾನದಂಡಗಳಿಗೆ ಅನುಗುಣವಾಗಿ ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ. ಸಾಲ ಮರುಪಾವತಿಗೆ ಸಂಬಂಧಿಸಿದಂತೆ ರೈತರ ಮೇಲೆ ಯಾವುದೇ ರೀತಿಯ ಅನಗತ್ಯ ಒತ್ತಡ ಹೇರಬಾರದು ಎಂದು ಬ್ಯಾಂಕ್‌ಗಳಿಗೆ ಸೂಚಿಸಿದ್ದಾರೆ.

**<><*<><>*><>**

ಕಸ್ತೂರಿ ರಂಗನ್ ವರದಿ ವಿಚಾರದಲ್ಲಿ ಬಿಜೆಪಿ ನಾಯಕರು ಹಾಗೂ ಸಂಸದರು ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಶ್ಚಿಮಘಟ್ಟಗಳ ಸಂರಕ್ಷಣೆ ಹೆಸರಿನಲ್ಲಿ ಈ ಪ್ರದೇಶಗಳನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದು ಗುರುತಿಸಿರುವುದರಿಂದ ಜನರಲ್ಲಿ ಆತಂಕ ಮನೆ ಮಾಡಿದೆ. ರಾಜ್ಯ ಸರ್ಕಾರ ಈಗಾಗಲೇ ಈ ವರದಿಯನ್ನು ತಿರಸ್ಕರಿಸುವ ಸ್ಪಷ್ಟ ನಿಲುವು ತೆಗೆದುಕೊಂಡಿದ್ದು, ಜಾರಿಗೆ ಅವಕಾಶ ನೀಡುವುದಿಲ್ಲ. ಮಲೆನಾಡಿನ ರೈತರು ಹಾಗೂ ಜನರು ಆತಂಕ ಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ.

**<><*<><>*><>**

ಪ್ರತಿಭಾವಂತ ವಿದ್ಯಾರ್ಥಿಗಳೇ ಬೆಂಗಳೂರಿನ ಹೆಮ್ಮೆ ಮತ್ತು ಭವಿಷ್ಯ ಎಂದು ಜಿಬಿಎ ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನಮ್ಮೂರ ಹೆಮ್ಮೆ ಪೌರ ಸನ್ಮಾನ ಕಾರ್ಯಕ್ರಮದಲ್ಲಿ ಶಾಲೆ ಮತ್ತು ಪದವಿಪೂರ್ವ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ೧೮೧ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅಭಿನಂದಿಸಿ ಮಾತನಾಡಿದ ಅವರು, ಒಬ್ಬ ವಿದ್ಯಾರ್ಥಿ ೯೯ಕ್ಕೂ ಹೆಚ್ಚು ಅಂಕಗಳನ್ನು ಪಡೆಯುವುದು ಸುಲಭದ ಕೆಲಸವಲ್ಲ ಎಂದು ತಿಳಿಸಿದ್ದಾರೆ. ಓದಿನಲ್ಲಿ ಆಸಕ್ತಿಯಿರುವ ಮಕ್ಕಳಿಗೆ ಶಾಲೆ ಮುಖ್ಯವಲ್ಲ, ಪರಿಶ್ರಮವೇ ಮುಖ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

<u>ಸಂಕ್ಷಿಪ್ತ ಸುದ್ದಿಗಳು</u>

೧. ಮೊದಲ ಹಂತದ ಬರಪೀಡಿತ ತಾಲ್ಲೂಕುಗಳ ಪಟ್ಟಿಯಲ್ಲಿ ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕು ಮಾತ್ರ ಸೇರ್ಪಡೆಯಾಗಿರುವ ಹಿನ್ನೆಲೆಯಲ್ಲಿ, ಜಿಲ್ಲೆಯ ಉಳಿದ ತಾಲ್ಲೂಕುಗಳನ್ನೂ ಎರಡನೇ ಹಂತದ ಪಟ್ಟಿಯಲ್ಲಿ ಸೇರಿಸುವಂತೆ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗುವುದು ಎಂದು ಯಾದಗಿರಿ ಮತಕ್ಷೇತ್ರದ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**